**ಪ್ರಧಾನ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ**

**ಸಿ.ಸಿ. ನಂ. 603/2020**

| | | | |
|---|---|---|---|
| **ಹೆಸರು** | **:** | **ನರೇಶ** | **ದೋ.ಸಾ. 6** |
| **ತಂದೆಯ ಹೆಸರು** | **:** | **ಅನಂತಯ್ಯ** | **ಪ್ರಾ.ಸಾ. 6** |
| **ವಯಸ್ಸು** | **:** | **23 ವರ್ಷ** | **ದಿನಾಂಕಃ 20-03-2024** |
| **ಉದ್ಯೋಗ** | **:** | **ಚಾಲಕ** | |
| **ವಾಸಸ್ಥಳ** | **:** | **ಸೋಮಲಿಂಗದಳ್ಳಿ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ಈ ದಿನ ನ್ಯಾಯಾಲಯದ ಮುಂದೆ ಹಾಜರಿರುವ ಈ ಪ್ರಕರಣದ ಆರೋಪಿತರು ನನಗೆ ಗೊತ್ತಿಲ್ಲ.

ಅದೇ ರೀತಿ ಪ್ರಕರಣದ ಸಾಕ್ಷಿದಾರರಾದ ಚಾಸಾ-1, 4, 5 ಮತ್ತು 7 ರಿಂದ 10 ರವರು ಸಹ ನನಗೆ ಗೊತ್ತಿಲ್ಲ.

ನನಗೆ ಈ ಪ್ರಕರಣದ ಬಗ್ಗೆ ಏನೂ ಗೊತ್ತಿಲ್ಲ. ಈ ಪ್ರಕರಣದಲ್ಲಿ ನಡೆದಿದೆ ಎನ್ನಲಾದ ಘಟನೆಯನ್ನು ನಾನು ಕಣ್ಣಾರೆ ಕಂಡಿಲ್ಲ. ನಾನು ಯಾವುದೇ ಜಗಳ ಬಿಡಿಸಲು ಹೋಗಿಲ್ಲ. ಜಗಳ ಆದ ಬಗ್ಗೆ ನನಗೆ ಗೊತ್ತೇ ಇಲ್ಲ. ಸಾಕ್ಷಿ ಸ್ವ-ಇಚ್ಛೆಯಿಂದ ನಾನು ಹೈದ್ರಾಬಾದನಲ್ಲಿ ಕೆಲಸ ಮಾಡುತ್ತೇನೆ ಹಾಗಾಗಿ ನನಗೇನು ಗೊತ್ತಿಲ್ಲ ಎನ್ನುತ್ತಾರೆ. ಆರೋಪಿತರ ಮನೆ ನಮ್ಮ ಮನೆಯ ಸಮೀಪದಲ್ಲಿ ಇಲ್ಲ ದೂರದಲ್ಲಿ ಇದೆ. ಚಾಸಾ-1 ರವರು ವಿಷ ಕುಡಿದ ಬಗ್ಗೆ ನನಗೆ ಗೊತ್ತಿಲ್ಲ.

ಪೋಲೀಸರು ಈ ಪ್ರಕರಣದ ಸಂಬಂಧ ನನ್ನನ್ನು ವಿಚಾರಣೆ ಮಾಡಿಲ್ಲ. ಪೋಲೀಸರ ಮುಂದೆ ನಾನು ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಕೊಟ್ಟಿರುವ ಹೇಳಿಕೆಗೆ ಈ ಸಾಕ್ಷಿ ಸಂಪೂರ್ಣ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಸಂಪೂರ್ಣ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**<u>ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ದಿನಾಂಕ 20-01-2020 ರಂದು ಸಾಕ್ಷಿ ಕೊಟ್ಟಿದ್ದಾರೆ ಎನ್ನಲಾದ ಹೇಳಿಕೆಯ ಸಂಪೂರ್ಣ ಭಾಗವನ್ನು ಸ.ಸ.ಅ. ರವರು ಸಾಕ್ಷಿಗೆ ಓದಿ ಹೇಳುತ್ತಾರೆ. ಅದನ್ನು ಕೇಳಿಸಿಕೊಂಡ ಸಾಕ್ಷಿ, ಈಗ ನೀವು ನನಗೆ ಓದಿ ಹೇಳಿದ ರೀತಿಯ ಯಾವುದೇ ಹೇಳಿಕೆಯನ್ನು ನಾನು ಪೋಲಿಸರ ಮುಂದೆ ಕೊಟ್ಟಿಲ್ಲ ಎನ್ನುತ್ತಾರೆ.

ಸಾಕ್ಷಿ ಕೊಟ್ಟಿದ್ದಾರೆ ಎನ್ನಲಾದ ಹೇಳಿಕೆಯನ್ನು ಈಗ ನಿಪಿ-6 ಎಂದು ಗುರುತಿಸಲಾಯಿತು.

ನಿಪಿ-6 ರಂತೆ ಪೋಲೀಸರ ಮುಂದೆ ಹೇಳಿಕೆ ಕೊಟ್ಟಿದ್ದರೂ ಸಹ ಈಗ ಆರೋಪಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಸಿ.ಎಸ್. ವಕೀಲರಿಂದಃ ಇಲ್ಲಾ</u>**

**ಮರುವಿಚಾರಣೆಃ ಇಲ್ಲಾ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ. ಚಿಂಚೋಳಿ**